ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:4/2021

ಚಾಸಾ:6 ಪ್ರಾಸಾ:4

ದಿನಾಂಕ: 16.08.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಅಲ್ತಾಫ್ |
| ತಂದೆಯ ಹೆಸರು | : | ಎಂ ಎ ಖಾದರ್ |
| ವಯಸ್ಸು | : | 43 ವರ್ಷ |
| ಉದ್ಯೋಗ | : | ವ್ಯವಹಾರ |
| ವಾಸ ಸ್ಥಳ | : | ಮರವಂತೆ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಆರೋಪಿತರನ್ನು ನೋಡಿ ಪರಿಚಯವಿರುತ್ತದೆ. ಸಾಕ್ಷಿಗೆ ಆರೋಪಿ ದಸ್ತಗಿರಿ ಪಂಚನಾಮೆಯನ್ನು ತೋರಿಸಿದ್ದು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-10 ಎಂದು, ಸಾಕ್ಷಿ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಂಯಿತು. ಸದ್ರಿ ಸಹಿಗಳನ್ನು ಠಾಣೆಯಲ್ಲಿ ಮಾಡಿರುತ್ತೇನೆ. ಸದ್ರಿ ದಾಖಲೆಯಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ: 22-05-2020 ರಂದು ಪೊಲೀಸರು ಆರೋಪಿತರನ್ನು ವಶಕ್ಕೆ ಪಡೆಯುವ ವೇಳೆಗೆ ನಾನು ಹಾಜರು ಇದ್ದು ಬೆಳಗ್ಗೆ 8-30 ರಿಂದ 9 ವರೆಗೆ ಕ್ರಮ ವಹಿಸಿ ಆರೋಪಿತರನ್ನು ವಶಕ್ಕೆ ಪಡೆದು ನಿಪಿ-10ಕ್ಕೆ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಮೇಲೆ ಹೇಳಿದ ಕ್ರಮವನ್ನು ನನ್ನ ಸಮಕ್ಷಮ ಜರುಗಿಸಿದ್ದರೂ ಆರೋಪಿತರು ನನ್ನ ಪರಿಚಯಸ್ಥರಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆ: ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**